# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 368
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 15.02.2024
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರತಿಷ್ಠಿತ ಕಾಲೇಜುಗಳಲ್ಲಿ ಎಗ್ಗಿಲ್ಲದೇ ನಡೆಯುತ್ತಿರುವ ಡ್ರಗ್ಸ್ ದಂಧೆ ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದಲ್ಲಿ ಮಾದಕ ವಸ್ತುಗಳ ಮಾರಾಟ, ಸಾಗಾಣೆ ಮತ್ತು ಸೇವನೆ ಕುರಿತಂತೆ ಎನ್.ಡಿ.ಪಿ.ಎಸ್. ಕಾಯ್ದೆ, 1985ರಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |
| ಆ) | ಶಾಲಾ ವಿದ್ಯಾರ್ಥಿಗಳು ಹಾಗೂ ಕಾಲೇಜು ವಿದ್ಯಾರ್ಥಿಗಳು ಡ್ರಗ್ಸ್ ಸೇವನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಶಾಲಾ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ<br>➢ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ 1908ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆ ಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್.ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.<br>➢ ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | ➢ ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.<br>➢ ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್ಸ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances Act, 1988"ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>➢ ಕೊರಿಯರ್ಸ್ / ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ರಾಜ್ಯದಲ್ಲಿ 43 ಸೈಬರ್ ಎಕಾನಾಮಿಕ್ & ನಾರ್ಕೋಟಿಕ್ ಪೊಲೀಸ್ ಠಾಣೆ(CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ. |

<table>
<tr>
<td>ಇ)</td>
<td>ಈ ಬಗ್ಗೆ ಕಳೆದ 2 ವರ್ಷದಿಂದ ಪೊಲೀಸ್ ಇಲಾಖೆಯಲ್ಲಿ ಎಷ್ಟು ಕೇಸು ದಾಖಲಾಗಿದೆ ತಪ್ಪಿಸ್ಥರ ವಿರುದ್ಧ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು:</td>
<td>ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ, 1988ರಡಿಯಲ್ಲಿ ಆರೋಪಿಗಳ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ:<br>
<table>
<tr><th>ವರ್ಷ</th><th>ಎನ್.ಡಿ.ಪಿ.ಎಸ್ ಕಾಯ್ದೆ ಅಡಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳ ಸಂಖ್ಯೆ</th></tr>
<tr><td>2022</td><td>6406</td><td>6157</td></tr>
<tr><td>2023</td><td>6765</td><td>5919</td></tr>
</table>
ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳನ್ನು ಪೂರೈಸುವ ಮಾರಾಟಗಾರರು, ಸಾಗಾಣೆ ಮಾಡುವವರು ಮತ್ತು ಸೇವನೆ ಮಾಡುವವರು ಕಂಡು ಬಂದಲ್ಲಿ ಅವರುಗಳ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ, 1985ರಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ರೀತ್ಯಾ ಕ್ರಮಗಳನ್ನು ಜರುಗಿಸಲಾಗುತ್ತಿದೆ.</td>
</tr>
<tr>
<td>ಈ)</td>
<td>ಆ ಪೈಕಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಪತ್ತೆ ಹಚ್ಚಲಾಗಿದೆ: ಬಾಕಿ ಇರುವ ಪ್ರಕರಣಗಳು ತನಿಖೆಯು ಯಾವ ಹಂತದಲ್ಲಿದೆ? (ವಿವರ ನೀಡುವುದು)</td>
<td>ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ 1985ರಡಿಯಲ್ಲಿ ದಾಖಲಿಸಿರುವ ಪ್ರಕರಣಗಳಲ್ಲಿ ಬಂಧಿಸಿರುವ ಆರೋಪಿಗಳ ಸಂಖ್ಯೆ ಮತ್ತು ಪ್ರಕರಣಗಳ ಹಂತದ ವಿವರಗಳು ಈ ಕೆಳಕಂಡಂತಿದೆ<br>
<table>
<tr><th>ವರ್ಷ</th><th>ಎನ್.ಡಿ.ಪಿ.ಎಸ್ ಕಾಯ್ದೆ, 1985ರಡಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ಆರೋಪಿತರ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳ ಸಂಖ್ಯೆ</th><th>ತನಿಖೆ ಯಲ್ಲಿರುವ ಪ್ರಕರಣಗಳು</th></tr>
<tr><td>2022</td><td>6406</td><td>8556</td><td>6157</td><td>37</td></tr>
<tr><td>2023</td><td>6765</td><td>8931</td><td>5919</td><td>788</td></tr>
</table></td>
</tr>
</table>

ಒಇ 7 ಪಿಎನ್‌ಡಿ 2024(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು